# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2413 |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 27-03-2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದಿಂದ ಗೃಹಲಕ್ಷ್ಮೀ ಯೋಜನೆಯಡಿ ಸಿಂಧನೂರು ತಾಲ್ಲೂಕಿನ ಎಲ್ಲಾ ಬಿ.ಪಿ.ಎಲ್ ಕುಟುಂಬದ ಮನೆಯ ಯಜಮಾನಿಯರಿಗೆ ರೂ.2000/- ಗಳನ್ನು ನೀಡಲಾಗುತ್ತಿದೆಯೇ; | ಸರ್ಕಾರದ ಆದೇಶ ದಿನಾಂಕ:06.06.2023ರನ್ವಯ ಆಹಾರ ನಾಗರೀಕ ಸರಬರಾಜು ಇಲಾಖೆ ವಿತರಿಸುವ ಅಂತ್ಯೋದಯ, ಎಪಿಎಲ್, ಬಿಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆ ಗೃಹಲಕ್ಷ್ಮೀ ಯೋಜನೆಗೆ ಅರ್ಜಿ ನೋಂದಾಯಿಸಲು ಅರ್ಹರಿರುತ್ತಾರೆ.<br><br>ಗೃಹಲಕ್ಷ್ಮೀ ಯೋಜನೆಯಡಿ ಸಿಂಧನೂರು ತಾಲ್ಲೂಕಿನಲ್ಲಿ 98,174 ಫಲಾನುಭವಿಗಳು ನೋಂದಣಿಯಾಗಿರುತ್ತಾರೆ. |
| ಆ) | ಬಿ.ಪಿ.ಎಲ್ ಕುಟುಂಬಕ್ಕೆ ಸೇರಿದ ಕೆಲವರು ಜಿ.ಎಸ್.ಟಿ ಸಂಖ್ಯೆಯನ್ನು ಮಾತ್ರ ಪಡೆದಿದ್ದು, ಈವರೆಗೆ ಯಾವುದೇ ರಿಟರ್ನ್ ಫೈಲ್ ಮಾಡದಿದ್ದರೂ ಹಾಗೂ ಆದಾಯ ತೆರಿಗೆ ವ್ಯಾಪ್ತಿಗೆ ಒಳಪಡದಿದ್ದರೂ ಅವರು ಯೋಜನೆಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ದಿನಾಂಕ: 06.06.2023 ಮತ್ತು ದಿನಾಂಕ: 17.07.2023ರ ಸರ್ಕಾರದ ಮಾರ್ಗಸೂಚಿಯನ್ವಯ<br>(i) ಕುಟುಂಬದ ಯಜಮಾನಿ ಅಥವಾ ಆಕೆಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ<br>(ii) ಕುಟುಂಬದ ಯಜಮಾನಿ ಅಥವಾ ಆಕೆಯ ಪತಿ GST ರಿಟರ್ನ್ಸ್‌ಸಲ್ಲಿಸುವವರಾಗಿದ್ದಲ್ಲಿ ಯೋಜನೆಗೆ ಅರ್ಹರಿರುವುದಿಲ್ಲ.<br><br>ಗೃಹಲಕ್ಷ್ಮೀ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳ ಮಾಹಿತಿಯನ್ನು ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯ (EDCS) ದಿಂದ DBT ಮೂಲಕ ಧನಸಹಾಯ ಪಾವತಿಸುವ ಮುನ್ನ ಕುಟುಂಬ ಪೋರ್ಟಲ್‌ನಲ್ಲಿನ ಮಾಹಿತಿಯೊಂದಿಗೆ ಪರಿಶೀಲಿಸಿ, ತದನಂತರ IT/GST ಪಾವತಿದಾರರೆಂದು ತೋರುವ ಫಲಾನುಭವಿಗಳಿಗೆ ಗೃಹಲಕ್ಷ್ಮೀ ಯೋಜನೆಯಡಿ ಧನಸಹಾಯ ಪಾವತಿಸಲು ಅವಕಾಶವಿರುವುದಿಲ್ಲ.<br><br>ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯ (EDCS)ವು ಒದಗಿಸಿದ ಮಾಹಿತಿಯಂತೆ ಸಿಂಧನೂರು ತಾಲ್ಲೂಕಿನಲ್ಲಿ IT-GST ವ್ಯಾಪ್ತಿಗೆ ಒಳಪಡುವ 1209 ಪ್ರಕರಣಗಳಿರುತ್ತವೆ. |
| ಇ) | ಬಂದಿದ್ದಲ್ಲಿ, ಸರ್ಕಾರ ಈ ಸಂಬಂಧ ಕೈಗೊಂಡಿರುವ ಕ್ರಮಗಳೇನು: ಸಿಂಧನೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಇಂತಹ ಎಷ್ಟು ಪ್ರಕರಣಗಳು ಇವೆ; | |

| | | |
|---|---|---|
| ಈ) | ಸದರಿ ಸಮಸ್ಯೆಯನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಿ, ಸಿಂಧನೂರು ತಾಲ್ಲೂಕಿನ ಎಲ್ಲಾ ಅರ್ಹ ಬಿ.ಪಿ.ಎಲ್ ಕುಟುಂಬದ ಯಜಮಾನಿಯರಿಗೆ ಗೃಹಲಕ್ಷ್ಮೀ ಹಣವನ್ನು ನೀಡಲಾಗುವುದು? | GST ನೋಂದಣಿ ಪಡೆದು ನಂತರದಲ್ಲಿ ರದ್ದುಪಡಿಸಿ ಕೊಂಡಿರುವ ಫಲಾನುಭವಿಗಳಿಗೆ ಹಾಗೂ GST ನೋಂದಣಿ ಪಡೆದು Zero returns ಸಲ್ಲಿಸುವ ಫಲಾನುಭವಿಗಳಿಗೆ ಧನಸಹಾಯ ಪಾವತಿಸುವ ಬಗ್ಗೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. |

**ಸಂಖ್ಯೆ: ಮಮಇ 88 ಮಮಅ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.